# ಎನ್‌ಐಟಿಕೆ - ಬಾಷ್ ಗ್ಲೋಬಲ್ ಸಾಫ್ಟ್‌ವೇರ್ ಟೆಕ್ನಾಲಜೀಸ್ ಒಪ್ಪಂದ

**ಮಂಗಳೂರು:** ಎನ್‌ಐಟಿಕೆಯ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ವಿಭಾಗ ಉದ್ದಿಮೆ ಪ್ರಾಯೋಜಿತ ಸ್ನಾತಕೋತ್ತರ ಪದವಿಯನ್ನು (ಎಂ-ಟೆಕ್) ಪ್ರಾರಂಭಿಸಲು ಎನ್‌ಐಟಿಕೆ ಸುರತ್ಕಲ್ ಮತ್ತು ಬಾಷ್ ಗ್ಲೋಬಲ್ ಸಾಫ್ಟ್‌ವೇರ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಇತ್ತೀಚೆಗೆ ಒಪ್ಪಂದಕ್ಕೆ ಸಹಿ ಹಾಕಿವೆ. ಬಾಷ್ ಗ್ಲೋಬಲ್ ಸಾಫ್ಟ್ ವೇರ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್‌ನೊಂದಿಗೆ ಸಮಾಲೋಚಿಸಿ ವಿನ್ಯಾಸಗೊಳಿಸಲಾದ ಈ ಕಾರ್ಯಕ್ರಮ ಪವರ್ ಎಲೆಕ್ಟ್ರಾನಿಕ್ಸ್ ಮತ್ತು ಕಂಟ್ರೋಲ್ ಫಾರ್ ಎಲೆಕ್ಟ್ರಿಕ್ ವೆಹಿಕಲ್‌ನ ಪ್ರಮುಖ ವಿಷಯಗಳನ್ನು ಒಳಗೊಂಡ ಬಲವಾದ ಸೈದ್ಧಾಂತಿಕ ಕೋರ್ಸ್‌ಗಳು ಮತ್ತು ಪ್ರಯೋಗಾಲಯ ಕೋರ್ಸ್‌ಗಳನ್ನು ಹೊಂದಿದೆ.

Vijaya Karnataka, Date:25/09/22P. No, 03